ಕೊಡಗು ಜಿಲ್ಲೆಯಲ್ಲಿ ಖಾಲಿ ಇರತಕ್ಕ ಗ್ರಾಮಲೆಕ್ಕಿಗರ ಹಾಗೂ ಗ್ರಾಮ ಸಹಾಯಕರ ಹುದ್ದೆಗಳ ಭರ್ತಿ

1927 - ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕೊಡಗು ಜಿಲ್ಲೆಯಲ್ಲಿ ಎಷ್ಟು ಗ್ರಾಮ ಲೆಕ್ಕಿಗರ ಹುದ್ದೆಗಳು ಹಾಗೂ ಗ್ರಾಮ ಸಹಾಯಕರ ಹುದ್ದೆಗಳು ಖಾಲಿ ಇವೆ? ಸದರಿ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?*

ಆ) *ಗ್ರಾಮ ಸಹಾಯಕರ ಹುದ್ದೆಯನ್ನು ಖಾಯಂ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?*

ಇ) *ಕೊಡಗು ಜಿಲ್ಲೆಯಲ್ಲಿ ಎಷ್ಟು ಗ್ರಾಮ ಸಹಾಯಕರು ಇದ್ದಾರೆ? (ತಾಲ್ಲೂಕುವಾರು ವಿವರ ಒದಗಿಸುವುದು)*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಗ್ರಾಮಲೆಕ್ಕಿಗರ ಹುದ್ದೆಗಳು - 6

ಗ್ರಾಮ ಸಹಾಯಕರ ಹುದ್ದೆಗಳು - 8

ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಅವಕಾಶವಿಲ್ಲ. ಗ್ರಾಮ ಸಹಾಯಕರ ಹುದ್ದೆಗಳನ್ನು ಆಗಿಂದಾಗ್ಗೆ ಭರ್ತಿ ಮಾಡಲಾಗುತ್ತಿದೆ.

ಆ) ಪರಿಶೀಲನೆಯಲ್ಲಿದೆ.

ಇ) 1. ಮಡಿಕೇರಿ 34

2. ವೀರಾಜಪೇಟೆ 56

3. ಸೋಮವಾರಪೇಟೆ 42

ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಹಕ್ಕು ಪತ್ರ ವಿತರಣೆ

1928 - ಶ್ರೀ ಎಂ.ಪಿ. ಅಪ್ಪಚ್ಚುರಂಜನ್ (ಸೋಮವಾರಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸೋಮವಾರಪೇಟೆ ತಾಲ್ಲೂಕಿನಲ್ಲಿ ಕಳೆದ ಹಲವಾರು ವರ್ಷಗಳಿಂದ ಪೈಸಾರಿ, ಊರುಡುವೆ, ಊರುಗುಪ್ಪೆಗಳಲ್ಲಿ ಮನೆಕಟ್ಟಿದವರ ಸಂಖ್ಯೆ ಎಷ್ಟು?*

ಆ) *ಅವರಿಗೆ ಯಾವಾಗ ಹಕ್ಕುಪತ್ರ ವಿತರಿಸಲಾಗುವುದು?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಪೈಸಾರಿ	ಊರುಡುವೆ	ಊರುಗುಪ್ಪೆ
2877	331	218